ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 860 (1155)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಸಿ.ಎಂ. ಇಬ್ರಾಹಿಂ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ವಿಷಯ : ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳ ಬಗ್ಗೆ

(ಅ) 2019-20 ಮತ್ತು 2020-2021ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಅಲ್ಪಸಂಖ್ಯಾತರ ನಿರ್ದೇಶನಾಲಯ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಎಷ್ಟು ಅನುದಾನಗಳನ್ನು ಬಿಡುಗಡೆ ಮಾಡಲಾಗಿದೆ ; ಅದರಲ್ಲಿ ಎಷ್ಟು ಅನುದಾನಗಳು ಬಳಕೆಯಾಗಿದೆ; ಬಳಕೆಯಾಗದೆ ಅನುದಾನ ಉಳಿಕೆಯಾಗಿದ್ದಲ್ಲಿ ಕಾರಣವೇನು ; (ಅಂಕಿ-ಅಂಶಗಳ ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಆ) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ "ಅರಿವು" ಯೋಜನೆಯಲ್ಲಿ 2019-20 ಮತ್ತು 2020-2021ನೇ ಸಾಲಿನಲ್ಲಿ ಮೀಸಲಿರಿಸಿದ ಅನುದಾನ ಎಷ್ಟು; ಯೋಜನೆಯಡಿ ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ ; ಅದರಲ್ಲಿ ಎಷ್ಟು ಅರ್ಜಿಗಳು ಪುರಸ್ಕøತವಾಗಿವೆ ; ತಿರಸ್ಕøತವಾದ ಅರ್ಜಿಗಳಿದ್ದಲ್ಲಿ ಕಾರಣವೇನು ; (ಸಂಪೂರ್ಣ ವಿವರ ಒದಗಿಸುವುದು)

(ಇ) ಅರಿವು ಯೋಜನೆಯಡಿ ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಅಂಕಗಳ (ಶೇಕಡವಾರು) ನಿಗಧಿಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಆಗುತ್ತಿರುವ ತೊಂದರೆ ಬಗ್ಗೆ ಸರ್ಕಾರದ ನಿಲುವೇನು;

(ಈ) ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಸಾಗರೋತ್ತರ (oveಡಿseಚಿs) ವಿದ್ಯಾರ್ಥಿ ವೇತನ ನೀಡಲಾಗುತ್ತಿದೆಯೇ ; ಹೌದಾದಲ್ಲಿ ಎಷ್ಟು ವಿದ್ಯಾರ್ಥಿಗಳು ಪ್ರಯೋಜನ ಪಡೆದಿದ್ದಾರೆ ; ಇಲ್ಲದಿದ್ದಲ್ಲಿ ಕಾರಣವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದ ಇಲಾಖೆ/ನಿಗಮ/ ಮಂಡಳಿಗಳಲಿ ೆಲ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; ಅವರ ವೇತನ ಪಾವತಿ ಮಾನದಂಡವೇನು ?